ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ

2489(2938); ಶ್ರೀ ಕುಮಾರಸ್ವಾಮಿ ಬಿ.ಕೆ. (ಸಕಲೇಶಪುರ)

ಅ) ಹಾಸನ ಜಿಲ್ಲೆ ಆಲೂರು ತಾಲ್ಲೂಕು ಕೇಂದ್ರದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿವೇಶನ ನೀಡುವುದಾಗಿ ಸುಮಾರು 6 ವರ್ಷಗಳ ಹಿಂದೆ ಸಾರ್ವಜನಿಕರಿಂದ ಶುಲ್ಕದೊಂದಿಗೆ ಅರ್ಜಿ ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ನಿವೇಶನ ನೀಡಲು ಯಾವ ಕ್ರಮ ಪಹಿಪಲಾಗಿದೆ;

ಇ) ಈ ವಿಳಂಬಕ್ಕೆ ಕಾರಣಗಳು ಏನು (ಪೂರ್ಣ ವಿವರ ನೀಡುವುದು)?

ಡಾ|| ಎಂ.ಹೆಚ್. ಅಂಬರೀಶ್ (ವಸತಿ ಸಚಿವರು)

ಅ) ಬಂದಿದೆ

ಆ) ಮತ್ತು ಇ) ಹಾಸನ ಜಿಲ್ಲೆ, ಆಲೂರು ತಾಲ್ಲೂಕು ಕಸಬಾ ಹೋಬಳಿ, ಯಡಿಯೂರು ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿ ವಸತಿ ಯೋಜನೆಗಾಗಿ ಸುಮಾರು 63 ಎಕರೆ 21 ಗುಂಟೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಭೂಸ್ವಾಧೀನ ಕಾಯ್ದೆ ಕಲಂ 4(1)ರ ಅಧಿಸೂಚನೆಯನ್ನು ದಿನಾಂಕ:02/02/2010ರಂದು ರಾಜ್ಯ ಪತ್ರದಲ್ಲಿ ಹೊರಡಿಸಲಾಗಿತ್ತು. ಆದರೆ, ಸದರಿ ಜಮೀನು ನೀರಾವರಿ ಬೆಳೆ ಬೆಳೆಯುವ ಪ್ರದೇಶವಾಗಿದ್ದು, ರೈತರ ತೀವ್ರ ವಿರೋಧದ ಕಾರಣ ದಿನಾಂಕ:04/01/2011ರಂದು ಮಾನ್ಯ ವಸತಿ ಸಚಿವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಸದರಿ ಜಮೀನನ್ನು ಭೂಸ್ವಾಧೀನದಿಂದ ಕೈಬಿಡಬೇಕೆಂದು ಸೂಚಿಸಲಾಗಿದ್ದು, ಹಿನ್ನೆಲೆಯಲ್ಲಿ ದಿನಾಂಕ: 11/01/2012ರಂದು ನಡೆದ 438ನೇ ಕರ್ನಾಟಕ ಗೃಹ ಮಂಡಳಿಯ ಮಂಡಳಿ ಸಭೆಯಲ್ಲಿ ಮೇಲ್ಕಂಡ ಜಮೀನನ್ನು ಭೂಸ್ವಾಧೀನದಿಂದ ಕೈಬಿಡಲು ನಿರ್ಣಯಿಸಲಾಯಿತು. ಮಂಡಳಿ ಸಭೆ ನಿರ್ಣಯದಂತೆ ಭೂಸ್ವಾಧೀನ ಕಾಯ್ದೆ ಕಲಂ 4(1)ರನ್ವಯ ಅಧಿಸೂಚನೆಯನ್ನು ಹಿಂಪಡೆಯಲು ದಿನಾಂಕ: 01/11/2012ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಆಲೂರು ತಾಲ್ಲೂಕಿನಲ್ಲಿ ವಸತಿ ಯೋಜನೆ ಹಮ್ಮಿಕೊಳ್ಳಲು ವಸತಿಗೆ ಸೂಕ್ತ ಜಮೀನನ್ನು ಗುರುತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.